ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**10.03.2026  13.10 hrs**

**<>><><*><><<>**

ಮುಖ್ಯಾಂಶಗಳು

**೧. ಚುನಾವಣಾ ಸುಧಾರಣೆಗಳ ಕುರಿತು ಚರ್ಚೆಗೆ ಆಗ್ರಹಿಸಿ ರಾಜ್ಯಸಭೆಯಲ್ಲಿ ವಿರೋಧ ಪಕ್ಷಗಳಿಂದ ಸಭಾತ್ಯಾಗ**

**೨. ಕಳೆದ ಹತ್ತು ವರ್ಷಗಳಲ್ಲಿ ದೇಶದಲ್ಲಿ ಆಹಾರ ಧಾನ್ಯಗಳ ಉತ್ಪಾದನೆ ಶೇಕಡ ೪೪ ರಷ್ಟು ಹೆಚ್ಚಳ - ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್**

**೩. ಹರ್ಮುಜ್ ಜಲಸಂಧಿ ಮೂಲಕ ತೈಲ ಸಾಗಾಣೆ ತಡೆದರೆ, ಇರಾನ್ ವಿರುದ್ಧ ಮಿಲಿಟರಿ ಕ್ರಮ - ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಎಚ್ಚರಿಕೆ**

**೪. ಸ್ವಿಜರ್ಲೆಂಡ್‌ನ ಬಾಸೆಲ್‌ನಲ್ಲಿ ಇಂದಿನಿಂದ ಸ್ವಿಸ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿ ಆರಂಭ**

**<>><><*><><<>**

ರಾಜ್ಯಸಭೆಯಲ್ಲಿಂದು ಕಲಾಪ ಆರಂಭವಾಗುತ್ತಿದ್ದಂತೆ ಕೇಂದ್ರ ಸಚಿವರು ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳ ವರದಿಗಳನ್ನು ಮಂಡಿಸಿದರು.  ಶೂನ್ಯ ವೇಳೆಯಲ್ಲಿ ಟಿಎಂಸಿ ಸಂಸದ ಡೆರೆಕ್ ಒಬ್ರೇನ್, ಪಶ್ಚಿಮ ಬಂಗಾಳ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಚುನಾವಣಾ ಆಯೋಗ ಕೈಗೊಂಡಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ ಕುರಿತು ಚರ್ಚೆಗೆ ಒತ್ತಾಯಿಸಿದರು. ಇದೇ ವೇಳೆ ಚುನಾವಣಾ ಸುಧಾರಣೆಗಳ ಕುರಿತು ಸದನದಲ್ಲಿ ಚರ್ಚೆಗೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ್ ಖರ್ಗೆ ಒತ್ತಾಯಿಸಿದರು. ಗದ್ದಲದ ನಡುವೆ ವಿರೋಧ ಪಕ್ಷಗಳ ಸದಸ್ಯರು ಸದನದಿಂದ ಹೊರ ನಡೆದರು. ವಿರೋಧ ಪಕ್ಷಗಳ ಬೇಡಿಕೆ ಕುರಿತು ಪ್ರತಿಕ್ರಿಯಿಸಿದ ಸದನದ ನಾಯಕ ಜೆ.ಪಿ.ನಡ್ಡಾ, ವಿರೋಧ ಪಕ್ಷವು ಸದನದೊಳಗೆ ನಿಜವಾದ ಚರ್ಚೆಯನ್ನು ಬಯಸುವುದಿಲ್ಲ. ಚುನಾವಣಾ ಸುಧಾರಣೆಗಳ ಕುರಿತು ಈಗಾಗಲೇ ಸದನದಲ್ಲಿ ಚರ್ಚೆ ಪೂರ್ಣಗೊಂಡಿದ್ದರೂ ಸಹ ಇದೇ ವಿಷಯವಾಗಿ ವಿರೋಧ ಪಕ್ಷಗಳು ಚರ್ಚೆ ನಡೆಸಬೇಕು ಎಂದು ಆಗ್ರಹಿಸಿರುವುದು ಸರಿಯಲ್ಲ. ವಿರೋಧ ಪಕ್ಷದ ಸದಸ್ಯರು ಸದನದಿಂದ ಹೊರ ನಡೆದಿದ್ದಾರೆ. ಅವರು ಸದನದಲ್ಲಿ ಯಾವುದೇ ಚರ್ಚೆಯನ್ನು ಬಯಸುವುದಿಲ್ಲ ಎಂದು ದೂರಿದರು.

**<>><><*><><<>**

ಕಳೆದ ಹತ್ತು ವರ್ಷಗಳಲ್ಲಿ ದೇಶದಲ್ಲಿ ಆಹಾರ ಧಾನ್ಯ ಉತ್ಪಾದನೆಯು ಶೇಕಡ ೪೪ರಷ್ಟು ಹೆಚ್ಚಳವಾಗಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಆಹಾರ-ಧಾನ್ಯ ಉತ್ಪಾದನೆಯಲ್ಲಿ ಭಾರತ ಹೊಸ ಮೈಲಿಗಲ್ಲು ಸಾಧಿಸಿದ್ದು, ಆಹಾರ ಧಾನ್ಯಗಳ ಉತ್ಪಾದನೆ ೩೫೭ ದಶಲಕ್ಷ ಟನ್ ತಲುಪಿದೆ ಎಂದು ಮಾಹಿತಿ ನೀಡಿದರು. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರ ರೈತರಿಗೆ ಅನುಕೂಲವಾಗುವಂತೆ ಹಾಗೂ ಆಹಾರ ಧಾನ್ಯ ಉತ್ಪಾದನೆಯನ್ನು ಹೆಚ್ಚಿಸಲು ಹಲವಾರು ಕೃಷಿ ಸುಧಾರಣೆಗಳು ಮತ್ತು ನೀತಿಗಳನ್ನು ಅನುಷ್ಠಾನಕ್ಕೆ ತಂದಿದೆ ಎಂದು ಹೇಳಿದರು. ಭಾರತ ಈಗ ಚೀನಾ ಹಿಂದಿಕ್ಕಿ ವಿಶ್ವದ ಅತಿದೊಡ್ಡ ಅಕ್ಕಿ ಉತ್ಪಾದಕ ರಾಷ್ಟ್ರವಾಗಿದೆ. ದ್ವಿದಳ ಧಾನ್ಯ ಉತ್ಪಾದನೆಯು ೧೯ ದಶಲಕ್ಷ ಟನ್‌ಗಳಿಂದ ಸುಮಾರು ೨೭ ದಶಲಕ್ಷ ಟನ್‌ಗಳಿಗೆ ಏರಿಕೆಯಾಗಿದೆ ಎಂದು ಸಚಿವ ಶಿವರಾಜ್‌ಸಿಂಗ್ ಚೌಹಾಣ್ ತಿಳಿಸಿದರು. ಆಹಾರ ಧಾನ್ಯ ಉತ್ಪಾದನೆಯಲ್ಲಿ ಸಮತೋಲಿತ ಬೆಳವಣಿಗೆ ಖಚಿತಪಡಿಸಿಕೊಳ್ಳಲು ದೇಶಾದ್ಯಂತ ೧೦೦ ಜಿಲ್ಲೆಗಳಲ್ಲಿ ಪ್ರಧಾನಮಂತ್ರಿ ಧನ-ಧಾನ್ಯ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ಅವರು ಹೇಳಿದರು.

**<><><*><><>**

ಪೆಟ್ರೋಲಿಯಂ ಉತ್ಪನ್ನಗಳು ಮತ್ತು ನೈಸರ್ಗಿಕ ಅನಿಲದ ನಿಯಂತ್ರಿತ ಲಭ್ಯತೆ, ಸ್ಥಿರ ಪೂರೈಕೆ ಮತ್ತು ಸಮಾನ ವಿತರಣೆಯನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ, ೧೯೫೫ ರ ಅಗತ್ಯ ಸರಕುಗಳ ಕಾಯ್ದೆಯಡಿ ತುರ್ತು ಅಧಿಕಾರಗಳನ್ನು ಬಳಸಿದೆ. ಇದೇ ವೇಳೆ ಮಧ್ಯಪ್ರಾಚ್ಯದಲ್ಲಿ ಬಿಕ್ಕಟ್ಟಿನ ಪರಿಸ್ಥಿತಿಯ ನಡುವೆ ದೇಶದ ಇಂಧನ ಭದ್ರತೆಯನ್ನು ರಕ್ಷಿಸಲು ಸರ್ಕಾರ ಅಗತ್ಯ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ತಿಳಿಸಿದ್ದಾರೆ. ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಪುರಿ ಅವರು ಪ್ರತಿದಿನವೂ ಬೆಳವಣಿಗೆಗಳನ್ನು ವೈಯಕ್ತಿಕವಾಗಿ ಮೇಲ್ವಿಚಾರಣೆ ಮಾಡುತ್ತಿದ್ದಾರೆ ಎಂದು ಅವರು ಹೇಳಿದ್ದಾರೆ.

**<><><*><><>**

ಕೇಂದ್ರ ಸರ್ಕಾರ ತೈಲ ಸಂಸ್ಕರಣಾಗಾರಗಳಿಗೆ ಹೆಚ್ಚಿನ ಎಲ್‌ಪಿಜಿ ಉತ್ಪಾದನೆಗಾಗಿ ಮತ್ತು ಅಂತಹ ಹೆಚ್ಚುವರಿ ಉತ್ಪಾದನೆಯನ್ನು ದೇಶೀಯ ಬಳಕೆಗೆ ಬಳಸಲು ಆದೇಶ ಹೊರಡಿಸಿದೆ. ಇಂಧನ ಪೂರೈಕೆಯಲ್ಲಿನ ಪ್ರಸ್ತುತ ಭೌಗೋಳಿಕ ರಾಜಕೀಯ ಅಡೆತಡೆಗಳು ಮತ್ತು ಎಲ್‌ಪಿಜಿ ಪೂರೈಕೆಯ ಮೇಲಿನ ನಿರ್ಬಂಧಗಳ ಮಧ್ಯೆ ಈ ಕ್ರಮ ಕೈಗೊಳ್ಳಲಾಗಿದೆ. ಕೇಂದ್ರ ಸರ್ಕಾರ ಮನೆಗಳಿಗೆ ಎಲ್‌ಪಿಜಿ ಪೂರೈಕೆಗೆ ಆದ್ಯತೆ ನೀಡಿದೆ. ಸಂಗ್ರಹಣೆ ಮತ್ತು ಕಾಳ ದಂಧೆಯನ್ನು

ತಪ್ಪಿಸಲು ೨೫ ದಿನಗಳ ಅಂತರದ ಬುಕಿಂಗ್ ಅವಧಿಯನ್ನು ಪರಿಚಯಿಸಿದೆ. ಆಮದು ಮಾಡಿಕೊಂಡ ಎಲ್‌ಪಿಜಿ ಯಿಂದ ಆಸ್ಪತ್ರೆಗಳು ಮತ್ತು ಶಿಕ್ಷಣ ಸಂಸ್ಥೆಗಳಂತಹ ಅಗತ್ಯ ವಲಯಗಳಿಗೆ ಸರಬರಾಜಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ.

<><><*><><<>

ಪಶ್ಚಿಮ ಏಷ್ಯಾ ಮತ್ತು ಗಲ್ಫ್ ಪ್ರದೇಶಗಳಲ್ಲಿ ಹೆಚ್ಚುತ್ತಿರುವ ಸಂಘರ್ಷದ ಕುರಿತು ಚರ್ಚಿಸಲು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳೊಂದಿಗೆ ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ಶ್ರೀಪ್ರಿಯಾ ರಂಗನಾಥನ್, ವರ್ಚುವಲ್ ಮೂಲಕ ಸಭೆ ನಡೆಸಿದರು. ಈ ವೇಳೆ ಸಂಸತ್ತಿನಲ್ಲಿ ನಿನ್ನೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ನೀಡಿದ ಹೇಳಿಕೆಯ ಪ್ರಮುಖ ಅಂಶಗಳನ್ನು ಅವರು ಸಭೆಯಲ್ಲಿ ಉಲ್ಲೇಖಿಸಿದರು. ವಿದೇಶಾಂಗ ಸಚಿವಾಲಯದ ವಿಶೇಷ ನಿಯಂತ್ರಣಾ ಕೊಠಡಿಯ ಮೂಲಕ ಹಾಗೂ ದೇಶದಲ್ಲಿರುವ ಪ್ರಾದೇಶಿಕ ಪಾಸ್‌ಪೋರ್ಟ್ ಕಚೇರಿಗಳು ಮತ್ತು ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿಗಳ ಮೂಲಕ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳೊಂದಿಗೆ ಸಮನ್ವಯವನ್ನು ಮತ್ತಷ್ಟು ಬಲಪಡಿಸುವ ಕ್ರಮಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು ಎಂದು ಸಾಮಾಜಿಕ ಜಾಲತಾಣದಲ್ಲಿ ವಿದೇಶಾಂಗ ಸಚಿವಾಲಯ ಮಾಹಿತಿ ನೀಡಿದೆ.

<><><*><><<>

ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿ-ಎನ್‌ಸಿಇಆರ್‌ಟಿ ಲನೇ ತರಗತಿಯ ಸಾಮಾಜಿಕ ವಿಜ್ಞಾನ ಪಠ್ಯ ಪುಸ್ತಕವನ್ನು ಹಿಂಪಡೆದಿದೆ. ಈ ಪಠ್ಯ ಪುಸ್ತಕದಲ್ಲಿ ಸಮಾಜದಲ್ಲಿ ನ್ಯಾಯಾಂಗದ ಪಾತ್ರ ಎಂಬ ಅಧ್ಯಾಯ ತೀವ್ರ ಟೀಕೆಗೆ ಒಳಗಾಗಿತ್ತು. ಈ ಹಿನ್ನೆಲೆಯಲ್ಲಿ ಸಂಪೂರ್ಣ ಪಠ್ಯ ಪುಸ್ತಕವನ್ನು ಎನ್‌ಸಿಇಆರ್‌ಟಿ, ಹಿಂಪಡೆದಿದೆ. ಇದೇ ವೇಳೆ ಎನ್‌ಸಿಇಆರ್‌ಟಿ ನಿರ್ದೇಶಕರು ಮತ್ತು ಸದಸ್ಯರು ಬೇಷರತ್ ಕ್ಷಮೆಯಾಚಿಸಿದ್ದಾರೆ.

<><><*><><<>

ಕೇಂದ್ರ ಕೈಗಾರಿಕಾ ಭದ್ರತಾ ಪಡೆಯ ಸಂಸ್ಥಾಪನಾ ದಿನದಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಅನೇಕ ಗಣ್ಯರು ಸಿಐಎಸ್‌ಎಫ್ ಸಿಬ್ಬಂದಿಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಸಿಐಎಸ್‌ಎಫ್‌ನ ಸಮರ್ಪಣೆ, ವೃತ್ತಿಪರತೆ ಹಾಗೂ ದೇಶದ ನಿರ್ಣಾಯಕ ಮೂಲಸೌಕರ್ಯ ಮತ್ತು ಸಾರ್ವಜನಿಕ ಸಂಸ್ಥೆಗಳನ್ನು ರಕ್ಷಿಸುವಲ್ಲಿನ

ಅಚಲ ಬದ್ಧತೆ ನಿಜಕ್ಕೂ ಶ್ಲಾಘನೀಯ ಎಂದು ಹೇಳಿದ್ದಾರೆ. ದೇಶಾದ್ಯಂತ ನಿರ್ಣಾಯಕ ಮೂಲಸೌಕರ್ಯಗಳನ್ನು ರಕ್ಷಿಸುವಲ್ಲಿ ಸಿಐಎಸ್‌ಎಫ್ ಪ್ರಮುಖ ಪಾತ್ರ ವಹಿಸುತ್ತದೆ. ಕರ್ತವ್ಯಕ್ಕೆ ಸಿಐಎಸ್‌ಎಫ್ ಸಿಬ್ಬಂದಿಯ ಅಚಲ ಬದ್ಧತೆಯು ಭಾರತದ ಭದ್ರತೆ ಮತ್ತು ಪ್ರಗತಿಗೆ ಹೆಚ್ಚಿನ ಕೊಡುಗೆ ನೀಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಿಐಎಸ್‌ಎಫ್ ಸಿಬ್ಬಂದಿಯ ಸಮರ್ಪಣೆಯು, ನಿಜವಾದ ದೇಶಭಕ್ತಿ ಮತ್ತು ವೃತ್ತಿಪರತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಅಮಿತ್ ಶಾ ಹೇಳಿದ್ದಾರೆ.

**<><><*><><<>**

ಹರ್ಮುಜ್ ಜಲಸಂಧಿಯ ಮೂಲಕ ತೈಲ ಸಾಗಾಣೆಯನ್ನು ಇರಾನ್ ತಡೆಯಲು ಪ್ರಯತ್ನಿಸಿದರೆ, ಅದರ ವಿರುದ್ಧ ಮಿಲಿಟರಿ ಕ್ರಮ ಕೈಗೊಳ್ಳುವುದಾಗಿ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದಾರೆ. ವಾಷಿಂಗ್ಟನ್ ಡಿಸಿಯಲ್ಲಿಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಟ್ರಂಪ್, ಇರಾನ್‌ನೊಂದಿಗಿನ ಸಂಘರ್ಷ ನಿರೀಕ್ಷೆಗಿಂತ ಬೇಗ ಕೊನೆಗೊಳ್ಳಬಹುದು. ಅಮೆರಿಕದ ಪಡೆಗಳು ಈಗಾಗಲೇ ಇರಾನ್‌ನ ವಾಯುಪಡೆ ಮತ್ತು ನೌಕಾಪಡೆಗೆ ಗಂಭೀರ ಹಾನಿಯುಂಟು ಮಾಡಿವೆ. ನಾಲ್ಕು ವಾರದೊಳಗೆ ಸಂಘರ್ಷ ಕೊನೆಗೊಳ್ಳಬಹುದು ಎಂದು ಭವಿಷ್ಯ ನುಡಿದಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ಇರಾನ್ ರಕ್ಷಣಾ ಪಡೆ, ಅಮೆರಿಕ, ಇಸ್ರೇಲ್ ದಾಳಿಗಳನ್ನು ಮುಂದುವರಿಸಿದರೆ, ಒಂದು ಲೀಟರ್ ತೈಲ ಸಹ ಈ ಪ್ರದೇಶದಿಂದ ಹೊರ ಹೋಗಲು ಅನುಮತಿಸುವುದಿಲ್ಲ ಎಂದು ಎಚ್ಚರಿಸಿದೆ. ಸಂಘರ್ಷ ಯಾವಾಗ ಕೊನೆಗೊಳ್ಳುತ್ತದೆ ಎಂಬುದನ್ನು ಅಮೆರಿಕ ನಿರ್ಧರಿಸುವುದಲ್ಲ, ಬದಲಾಗಿ ಅದನ್ನು ಇರಾನ್ ನಿರ್ಧರಿಸುತ್ತದೆ ಎಂದು ಇರಾನ್ ಸೇನೆಯ ವಕ್ತಾರರು ಹೇಳಿದ್ದಾರೆ.

**<><><*><><<>**

ಸ್ವಿಸ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ, ಬ್ಯಾಡ್ಮಿಂಟನ್ ತಾರೆಯರಾದ ಎಚ್.ಎಸ್.ಪ್ರಣಯ್ ಮತ್ತು ಕಿದಂಬಿ ಶ್ರೀಕಾಂತ್, ಭಾರತದ ಸವಾಲನ್ನು ಮುನ್ನಡೆಸಲಿದ್ದಾರೆ. ಸ್ವಿಜರ್ಲೆಂಡ್‌ನ ಬಾಸೆಲ್‌ನಲ್ಲಿ ಇಂದು ಬ್ಯಾಡ್ಮಿಂಟನ್ ಪಂದ್ಯಾವಳಿ ಆರಂಭವಾಗಲಿದೆ. ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಶ್ರೀಕಾಂತ್ ನಾಳೆ ಹಾಂಗ್‌ಕಾಂಗ್‌ನ ಜೇಸನ್ ಗುಣವಾನ್ ಅವರನ್ನು ಎದುರಿಸಲಿದ್ದಾರೆ. ಏಷ್ಯನ್ ಗೇಮ್ಸ್ ಕಂಚಿನ ವಿಜೇತ ಪ್ರಣಯ್, ಜಪಾನ್‌ನ ಕೋಕಿ ವಟನಾಬೆ ಅವರನ್ನು ಎದುರಿಸಲಿದ್ದಾರೆ. ತರುಣ್ ಮನ್ನೆಪಲ್ಲಿ ಮತ್ತೊಬ್ಬ ಜಪಾನಿನ ಆಟಗಾರ ಕೆಂಟಾ ನಿಶಿಮೋಟೊ ಅವರೊಂದಿಗೆ ಸೆಣಸಲಿದ್ದಾರೆ. ಇದೇ ವೇಳೆ ಆಯುಷ್ ಶೆಟ್ಟಿ ಕೆನಡಾದ ಬ್ರಿಯಾನ್ ಯಾಂಗ್ ಅವರನ್ನು ಎದುರಿಸಲಿದ್ದಾರೆ. ಕಿರಣ್ ಜಾರ್ಜ್, ಸಿಂಗಾಪುರದ ಲೋಹ್ ಕೀನ್ ಯೂ ಅವರೊಂದಿಗೆ ಮುಖಾಮುಖಿಯಾಗಲಿದ್ದಾರೆ. ಪುರುಷರ ಡಬಲ್ಸ್ ವಿಭಾಗದಲ್ಲಿ ಸಾತ್ವಿಕ್

ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ, ಸಿಂಗಾಪುರದ ಎಂಗ್ ಕೀಟ್ ವೆಸ್ಲಿ ಕೊ ಮತ್ತು ಜುನ್‌ಸುಕೆ ಕುಬೊ ಅವರನ್ನು ಎದುರಿಸಲಿದ್ದಾರೆ. ಇನ್ನೊಂದೆಡೆ, ಹರಿಹರನ್ ಅಂಶಕರುಣನ್ ಮತ್ತು ಎಂ.ಆರ್.ಅರ್ಜುನ್ ಜೋಡಿಯು ಚೈನೀಸ್ ತೈಪೆಯ ಚೆನ್ ಝಿ ರೇ ಮತ್ತು ಲಿನ್ ಯು ಚೆಹ್ ಅವರೊಂದಿಗೆ ಸೆಣಸಾಟ ನಡೆಸಲಿದ್ದಾರೆ. ಮಾಳವಿಕಾ ಬನ್ಸೋದ್, ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ ಥೈಲ್ಯಾಂಡ್‌ನ ಪೋರ್ನ್‌ಪಾವೀ ಚೊಚುವಾಂಗ್ ಅವರನ್ನು ಎದುರಿಸಲಿದ್ದಾರೆ. ಮಹಿಳಾ ಡಬಲ್ಸ್‌ನಲ್ಲಿ, ಟ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಪುಲ್ಲೆಲಾ, ಹಾಗೂ ಚೈನೀಸ್ ತೈಪೆಯ ಹು ಲಿಂಗ್ ಫಾಂಗ್ ಮತ್ತು ಝೆಂಗ್ ಯು ಚೆಹ್ ಅವರೊಂದಿಗೆ ಮುಖಾಮುಖಿಯಾಗಲಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**